# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 157 (220) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 16.07.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಎಂಆರ್ ಪಿಎಲ್ ಮತ್ತು ಇತರ ಉದ್ದಿಮೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡದೆ ರಾಷ್ಟ್ರ ಮಟ್ಟದಲ್ಲಿ ಉದ್ಯೋಗ ಅರ್ಜಿಗಳನ್ನು ಕರೆದು ಸ್ಥಳೀಯರಿಗೆ ಉದ್ಯೋಗ ನೀಡದಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಬೃಹತ್ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಿರುವ ಬಗ್ಗೆ ದಿನಾಂಕ: 30.06.2024ರ ಅಂತ್ಯಕ್ಕೆ ಘಟಕಗಳಿಂದ ಪಡೆದಿರುವ ತ್ರೈಮಾಸಿಕ ವರದಿಯನ್ವಯ ಎಂ.ಆರ್.ಪಿ.ಎಲ್ ಸಂಸ್ಥೆಯು 65% ಕನ್ನಡಿಗರಿಗೆ ಉದ್ಯೋಗವಕಾಶ ನೀಡಿದೆ.<br><br>MRPL ಕಂಪನಿಯು ಕೇಂದ್ರ ಸರ್ಕಾರದ ಸಾರ್ವಜನಿಕ ವಲಯದ ಉದ್ಯಮವಾಗಿರುವುದರಿಂದ (CPSE), ನೇಮಕಾತಿ ವಿಷಯಗಳಲ್ಲಿ ಭಾರತ ಸರ್ಕಾರವು ರೂಪಿಸಿದ ನಿಯಮಗಳನ್ನು ಅನುಸರಿಸುತ್ತಿದೆ.<br><br>MRPL ತನ್ನ ನೇಮಕಾತಿಗಳಲ್ಲಿ ಕೇಂದ್ರ ಸರ್ಕಾರದ DoPT ಮಾರ್ಗಸೂಚಿಗಳಿಗೆ ಅನುಸಾರವಾಗಿ ಆಯ್ಕೆ ಪ್ರಕ್ರಿಯೆಗಳನ್ನು ನಡೆಸುತ್ತಿದೆ ಹಾಗೂ ಸ್ಥಳೀಯ ಮತ್ತು ರಾಜ್ಯದಿಂದ ಬಂದವರು ಸೇರಿದಂತೆ ಉದ್ಯೋಗಕ್ಕಾಗಿ ಎಲ್ಲಾ ಅಭ್ಯರ್ಥಿಗಳಿಗೆ ನ್ಯಾಯಯುತ ಮತ್ತು ಸಮಾನ ಅವಕಾಶವನ್ನು ಮತ್ತು ಅಭ್ಯರ್ಥಿಗಳ ಆಯ್ಕೆಯನ್ನು ಸಂಪೂರ್ಣವಾಗಿ ಅರ್ಹತೆಯ ಆಧಾರದ ಮೇಲೆ ಮಾಡಲಾಗುತ್ತದೆ ಎಂದು ತಿಳಿಸಿರುತ್ತದೆ. |
| ಆ | ಬೃಹತ್ ಕೈಗಾರಿಕೆ ಸ್ಥಾಪಿಸಲು ಭೂಮಿಯನ್ನು ನೀಡಿರುವ ನಿರ್ವಸತಿಗರ ಕಾಲೋನಿಯಲ್ಲಿ ಮೂಲಭೂತ ಸೌರ್ಕಯಗಳನ್ನು ಒದಗಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಆರ್&ಆರ್ ಸಮಿತಿಯ ತೀರ್ಮಾನದಂತೆ ಸೂಕ್ತ ನಿರ್ವಸಿತರಿಗೆ ಹಂಚಿಕೆ ಮಾಡಲಾಗಿರುತ್ತದೆ.<br><br>ಇತರ ಬೃಹತ್ ಕೈಗಾರಿಕೆ ಸ್ಥಾಪಿಸುವ ಸಂದರ್ಭದಲ್ಲಿ ನಿರ್ವಸಿತರ ಕಾಲೋನಿ ನಿರ್ಮಿಸಲು ವಿಶೇಷ ಭೂಸ್ವಾಧೀನಾಧಿಕಾರಿ ಇವರು ಗುರುತಿಸಿ ಹಸ್ತಾಂತರಿಸಿದ ಜಮೀನನಲ್ಲಿ ಕಾಲೋನಿಯನ್ನು ನಿರ್ಮಿಸಿದ್ದು, ಮೂಲಭೂತ ಸೌಕರ್ಯಗಳೊಂದಿಗೆ ನಿರ್ವಸಿತರಿಗೆ ಹಂಚಲಾಗಿರುತ್ತದೆ. |

| | | |
|---|---|---|
| ಇ | ಬೃಹತ್ ಕೈಗಾರಿಕಾ ಸ್ಥಾಪಿಸುವ ಸಂದರ್ಭದಲ್ಲಿ ವಶಪಡಿಸಿಕೊಂಡಿರುವ ಜಾಗದ ಬಗ್ಗೆ ಮತ್ತು ಸ್ಥಳ ನೀಡಿದವರಿಗೆ ಸವಲತ್ತುಗಳನ್ನು ನೀಡದಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಎಂ.ಆರ್.ಪಿ.ಎಲ್ ನ 4ನೇ ಹಂತದ ಭೂಸ್ವಾಧೀನ ಕುರಿತಂತೆ, ಪುನರ್ ವಸತಿ ಹಾಗೂ ಪುನರ್ ಸೌಲಭ್ಯವನ್ನು ಒದಗಿಸುವ ಬಗ್ಗೆ ಈಗಾಗಲೇ ಆರ್&ಆರ್ ಸಮಿತಿಯನ್ನು ಸರ್ಕಾರವು ರಚನೆ ಮಾಡಿದ್ದು, ಸದರಿ ಸಮಿತಿಯಲ್ಲಿ ಆರ್&ಆರ್ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ನಿರ್ಧಾರವಾಗಬೇಕಾಗಿರುತ್ತದೆ.<br><br>ತದನಂತರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಸರ್ಕಾರದ ಆದೇಶ ಪಡೆದು ನಿರ್ವಸಿತರಿಗೆ ಆರ್&ಆರ್ ಸವಲತ್ತುಗಳನ್ನು ನೀಡಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಈ ಬಗ್ಗೆ ದಿನಾಂಕ 12.07.2024 ರಂದು ಆರ್&ಆರ್ ಸಮಿತಿಯ ಸಭೆಯನ್ನು ಆಯೋಜಿಸಲಾಗಿರುತ್ತದೆ. ಸದರಿ ಸಭೆಯಲ್ಲಿ ನೀಡಬೇಕಾದ ಸವಲತ್ತುಗಳ ಬಗ್ಗೆ ಚರ್ಚಿಸಿ ಸಭೆಯ ತೀರ್ಮಾನವನ್ನು ಅನುಸರಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕಾಗಿರುತ್ತದೆ. |

ಸಿಐ 218 ಎಸ್‌ಪಿಐ 2024

**(ಎಂ.ಬಿ. ಪಾಟೀಲ)**

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು